ಈ) ಇಲ್ಲದಿದ್ದಲ್ಲಿ, ಕೇಂದ್ರ ಸರ್ಕಾರದಿಂದ ಪರವಾನಗಿಯನ್ನು ಪಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು?

ಉ) ಇತ್ತೀಚೆಗೆ ಅಡಿಗೆ ಅನಿಲದ ಬಳಕೆಯಿಂದ ವಾಹನ ಅಪಘಾತಗಳು ಸಂಭವಿಸಿರುವುದು ನಿಜವಲ್ಲವೇ?

ಊ) ಹಾಗಿದ್ದಲ್ಲಿ, ಸರ್ಕಾರ ಇದನ್ನು ತಡೆಗಟ್ಟಲು ಕೈಗೊಂಡ ಕ್ರಮಗಳೇನು?

ಶ್ರೀ ಸಿ.ಆರ್. ಸಗೀರ್ ಅಹ್ಮದ್ (ಸಾರಿಗೆ ಸಚಿವರು) :

ಅ) ಹೌದು.

ಆ) ಇಲಾಖೆಯು ಪ್ರತ್ಯೇಕ ಪರವಾನಗಿಗಳನ್ನು ನೀಡುತ್ತಿಲ್ಲವಾದುದರಿಂದ ನಿಖರವಾದ ಮಾಹಿತಿಯು ಇಲಾಖೆಯಲ್ಲಿ ಲಭ್ಯವಿರುವುದಿಲ್ಲ.

ಇ) ಇಲ್ಲ.

ಈ) ಮೋಟಾರು ವಾಹನಗಳಲ್ಲಿ ಎಲ್.ಪಿ.ಜಿ. ಅಳವಡಿಸುವುದನ್ನು ಅನುಮತಿಯಸಲು ಕರ್ನಾಟಕ ಸರಕಾರವು ಕೇಂದ್ರ ಮೋಟಾರು ವಾಹನ ಕಾಯಿದೆ 1988 ರ ಕಲಂ 52ನ್ನು ಹಾಗೂ ಎಲ್ ಪಿ ಜಿ (ಉಪಯೋಗದಲ್ಲಿ ನಿರ್ಭಂದ) ಆಜ್ಞೆ 1974ನ್ನು ತಿದ್ದುಪಡಿ ಮಾಡುವಂತೆ ಕೇಂದ್ರ ಸರ್ಕಾರವನ್ನು ಕೋರಿದೆ.

ಉ) ಹೌದು.

ಊ) ಕರ್ನಾಟಕ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ 34368-74:98, ದಿನಾಂಕ 15-12-1998ರಂದು ಮೋಟಾರುವಾಹನಗಳಲ್ಲಿ ಎಲ್.ಪಿ.ಜಿ. ಬಳಕೆಗೆ ಅನುಮತಿ ಇದೆಯೆಂದು ತೀರ್ಪು ನೀಡಿರುತ್ತದೆ. ಆದುದರಿಂದ ಮೋಟಾರು ವಾಹನ ಮಾಲೀಕರು ಅವರಾಗಿಯೇ ತಮ್ಮ ಮೋಟಾರು ವಾಹನಗಳಲ್ಲಿ ಎಲ್ಪಿಜಿ ಯನ್ನು ಅಳವಡಿಸಿಕೊಂಡಿರುತ್ತಾರೆ. ಸುರಕ್ಷಾ ಕ್ರಮಗಳನ್ನು ಅನುಸರಿಸುವಂತೆ ಎಚ್ಚರಿಕೆ ನೀಡಿ ಪತ್ರಿಕಾ ಪ್ರಕಟಣೆಗಳನ್ನು ಹೊರಡಿಸಲಾಗಿದೆ. ಕೇಂದ್ರ ಸರ್ಕಾರವನ್ನು ಎಲ್ಪಿಜಿ ಸಿಲಿಂಡರ್‌ಗಳನ್ನು ಅನುಮತಿಸಲು ಬೇಕಾದ ಸುರಕ್ಷಾಪ್ರಮಾಣಗಳನ್ನು ನಿಗದಿಪಡಿಸುವಂತೆ ಸಹಾ ಕೋರಲಾಗಿದೆ.

ಬೆಂಗಳೂರು ನಗರದಲ್ಲಿ ಖಾಸಗಿ ಬಸ್ ನಿಲ್ದಾಣವನ್ನು ನಿರ್ಮಿಸುವುದು

1172 (1424) ಶ್ರೀ ಪಿ.ಸಿ. ಮೋಹನ್ (ಚಿಕ್ಕಪೇಟೆ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೆಂಗಳೂರು ನಗರಕ್ಕೆ ಬರುವ ಹಾಗೂ ಇಲ್ಲಿಂದ ಹೋಗುವ ಖಾಸಗಿ ಬಸ್ಸುಗಳ ನಿಲ್ದಾಣವನ್ನು ಮಿನರ್ವ ಮಿಲ್ ಮೈದಾನದಲ್ಲಿ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಸಿ.ಆರ್. ಸಗೀರ್ ಅಹ್ಮದ್ (ಸಾರಿಗೆ ಸಚಿವರು) :

ಅ) ಬೆಂಗಳೂರು ನಗರಕ್ಕೆ ಬರುವ ಹಾಗೂ ಇಲ್ಲಿಂದ ಹೋಗುವ ಖಾಸಗಿ ಬಸ್ಸುಗಳ ನಿಲ್ದಾಣವನ್ನು ಕಲಾಸಿಪಾಳ್ಯಂ ಬಸ್ ನಿಲ್ದಾಣದಿಂದ ಸ್ಥಳಾಂತರಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ. ಸ್ಥಳದ ಬಗ್ಗೆ ನಿರ್ದಿಷ್ಟತೀರ್ಮಾನವಾಗಿರುವುದಿಲ್ಲ.

ಆ) ಮಿಸರ್ಮಿಂಗ್ ಮೈದಾನದ ಜಾಗದ ಮಾಲೀಕತ್ವದ ಬಗ್ಗೆ ನ್ಯಾಯಾಲಯದಲ್ಲಿ ದಾವೆ ಇರುತ್ತದೆ. ಸದರಿ ವಿಷಯವನ್ನು ಇತ್ಯರ್ಥಗೊಳಿಸುವ ಬಗ್ಗೆ ಮಧ್ಯಸ್ಥರನ್ನು (ಆರ್ಬಿಟ್ರೇಟರ್) ನೇಮಕ ಮಾಡಲಾಗಿದೆ. ಖಾಸಗಿ ಬಸ್ಸುಗಳ ಮಾಲೀಕರ ಸಂಘದ ಜೊತೆ ಮಾತುಕತೆ ನಡೆಸಲಾಗಿದೆ. ಅವರಿಂದ ಪ್ರತಿಕ್ರಿಯೆ ಬಂದಿರುವುದಿಲ್ಲ.

ಹೊಸ ತಾಲ್ಲೂಕುಗಳ ರಚನೆ

1174 (1458) ಶ್ರೀ ನಂಜಯ್ಯನಮಠ ಎಸ್.ಜಿ (ಗುಳೇದಗುಡ್ಡ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ರಾಜ್ಯದಲ್ಲಿ ಹೊಸದಾಗಿ ರಚನೆಯಾದ ಜಿಲ್ಲೆಗಳಿಗೆ ಶಿಫಾರಸ್ಸುಗಳ ಆಧಾರದ ಮೇಲೆ ಹೊಸ ತಾಲ್ಲೂಕುಗಳ ರಚನೆಯನ್ನು ಮಾಡುವ ಯೋಜನೆ ಸರ್ಕಾರಕ್ಕಿದೆಯೇ;

2) ಇದ್ದಲ್ಲಿ ಹೊಸ ತಾಲ್ಲೂಕುಗಳನ್ನು ಎಂದಿನಿಂದ ಜಾರಿಗೊಳಿಸಲಾಗುವುದು?

ಶ್ರೀ ಹೆಚ್.ಸಿ ಶ್ರೀ ಕಂಠಯ್ಯ (ಕಂದಾಯ ಸಚಿವರು) :

1) ಸರ್ಕಾರ ಪರಿಶೀಲನೆಯಲ್ಲಿದೆ.

2) ದಶವಾರ್ಷಿಕ ಜನಗಣತಿ - 2001 ರ ಪ್ರಕ್ರಿಯೆ ಮುಗಿದ ನಂತರ ಹೊಸ ತಾಲ್ಲೂಕುಗಳನ್ನು ರಚಿಸುವ ವಿಷಯವನ್ನು ನಿಯಮಾನುಸಾರ ಪರಿಶೀಲಿಸಲಾಗುವುದು.

ಸಂಕೇಶ್ವರ ವಿಧಾನ ಸಭೆ ಕ್ಷೇತ್ರದಲ್ಲಿ ಆಶ್ರಯ, ಇಂದಿರಾ ಆವಾಸ್, ಅಂಬೇಡ್ಕರ್ ಯೋಜನೆಯಲ್ಲಿ ನಿರ್ಮಿಸಿರುವ ಮನೆಗಳು

1178 (1440) ಶ್ರೀ ಪಾಟೀಲ ಗಣಪತಿರಾವ್ ಪಾಂಡುರಂಗ (ನಿಪ್ಪಾಣಿ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಂಕೇಶ್ವರ ವಿಧಾನಸಭಾ ಕ್ಷೇತ್ರದಲ್ಲಿ ಕಳೆ ಮೂರು ವರ್ಷದಲ್ಲಿ ಆಶ್ರಯ, ಇಂದಿರಾ ಆವಾಸ್, ಅಂಬೇಡ್ಕರ್ ಯೋಜನೆಗಳಲ್ಲಿ ಯಾವ ಯಾವ ಊರಿಗೆ ಎಷ್ಟು ಎಷ್ಟು ಮನೆಯನ್ನು ಮಂಜೂರು ಮಾಡಲಾಗಿದೆ;

ಆ) ಸಂಕೇಶ್ವರ ವಿಧಾನಸಭಾ ಕ್ಷೇತ್ರದ ಬುಗಡೆ ಆಲೂರು ಆನಂದಾಪುರ ಹಾಗೂ ಆನಂದ್‌ಪುರ್ ಸೆಂಟರ್ ಹತ್ತಿರಗಿಯಲ್ಲಿ ಸರ್ಕಾರದ ಜಮೀನನ್ನು ಕಾಯ್ದಿರಿಸಿದ ಸ್ಮಶಾನಜಾಗದಲ್ಲಿ ಕಾಯ್ದಿಬಾಹಿರವಾಗಿ ಪಂಚಾಯಿತಿಯಿಂದ ಮನೆ ಕಟ್ಟಿಕೊಳ್ಳಲು ಫಲಾನುಭವಿಯಲ್ಲದೇ ಇರುವವರಿಗೆ ಮನೆ ಕಟ್ಟಿಕೊಳ್ಳಲು